



ಅರುಣ ಪಿ. ಭಟ್ಟ

## ವಾರಭವಿಷ್ಯ: 06.02.2025ರಿಂದ 12.02.2025ರವರೆಗೆ




ಈ ವಾರ ನಿಮ್ಮ ವರ್ಚಸ್ಸು ವೃದ್ಧಿ ಆಗಲಿದೆ. ಶೈಕ್ಷಣಿಕ ಕ್ಷೇತ್ರದಲ್ಲಿ ಹೆಚ್ಚಿನ ಪ್ರಗತಿ. ವಾರದ ಮಧ್ಯದಲ್ಲಿ ಹೆಚ್ಚಿನ ಹಣ ಖರ್ಚಾಗಲಿದೆ. ಆತಂಕಕ್ಕೆ ಗುರಿಯಾಗುವ ಸಾಧ್ಯತೆ ಇದೆ. ಶತ್ರುಗಳ ಉಪಟಳ ಹೆಚ್ಚಾಗಲಿದ್ದು ಆತಂಕಕ್ಕೆ ಗುರಿಯಾಗುತ್ತೀರಿ. ಕೌಟುಂಬಿಕ ಕಲಹ ಏರ್ಪಡಬಹುದು. ವೈಯಕ್ತಿಕ ಸಂಬಂಧದಲ್ಲಿ ಇತರರ ಹಸ್ತಕ್ಷೇಪದಿಂದ ಬೇಸರ ಉಂಟಾಗುತ್ತದೆ. ಶುಭದಿನ: 11. ಶ್ರೀರಾಜರಾಜೇಶ್ವರಿ ಜಪ ಮಾಡಿರಿ.




ವಾರದ ಆರಂಭದಲ್ಲಿ ಉದ್ಯೋಗ ಸ್ಥಳದಲ್ಲಿ ಏಳ್ಗೆ ಇದೆ. ನಿಮ್ಮ ಆರೋಗ್ಯ ಉತ್ತಮವಾಗಿ ಇರಲಿದೆ. ಬಿಡುವಿಲ್ಲದ ಕೆಲಸದ ಮಧ್ಯೆಯೂ ಸಂಗಾತಿ ಮಕ್ಕಳ ಜೊತೆ ಸಮಯ ಕಳೆಯಲಿದ್ದೀರಿ. ವಾರದ ಮಧ್ಯ ಭಾಗದಲ್ಲಿ ನಿರೀಕ್ಷೆ ಮಾಡಿದ್ದಕ್ಕಿಂತ ಹೆಚ್ಚಿನ ಅನುಕೂಲ ನಿಮಗೆ ಒದಗಿಬರಲಿದೆ. ಶೈಕ್ಷಣಿಕ ಕ್ಷೇತ್ರದಲ್ಲಿ ನೀವು ಹಾಕಿದ್ದ ಶ್ರಮಕ್ಕೆ ತಕ್ಕ ಫಲ ದೊರೆಯಲಿದೆ. ಶುಭದಿನ: 10. ಶ್ರೀರಾಮರಕ್ಷಾಸ್ತೋತ್ರ ಪಠಿಸಿರಿ.




ವಾರದ ಆರಂಭದಲ್ಲೇ ಮನೆಯಲ್ಲಿ ದೇವತಾ ಆರಾಧನೆ ಕಾರ್ಯಕ್ರಮದ ಸಾಧ್ಯತೆ ಇದೆ. ಅಗತ್ಯ ಇರುವವರಿಗೆ ನೆರವು ನೀಡಲಿದ್ದೀರಿ. ಆದಾಯದಲ್ಲಿ ಹೆಚ್ಚಳ ಆಗುವ ಸಾಧ್ಯತೆ ಇದೆ. ಮನೆಯ ವಿಚಾರದಲ್ಲಿ ಗಮನಹರಿಸಬೇಕಾದ ಅಗತ್ಯ ಕಂಡುಬರುತ್ತದೆ. ಪ್ರಗತಿಯ ಹಾದಿಯಲ್ಲಿ ಸಾಗಲಿದ್ದೀರಿ. ಉದ್ಯೋಗಸ್ಥರಿಗೆ ಹೆಚ್ಚಿನ ಜವಾಬ್ದಾರಿ ಹೆಗಲ ಮೇಲೆ ಬರುತ್ತದೆ. ಶುಭದಿನ: 07. ಸೌಂದರ್ಯ ಲಹರಿ ಪಠಿಸಿರಿ.




ಉದ್ಯೋಗಕ್ಕೆ ಹೊರತಾದ ಕೆಲಸಗಳನ್ನು ಪೂರೈಸುವುದಕ್ಕೇ ಸಮಯ ನೀಡಬೇಕಾಗುತ್ತದೆ. ಉದ್ಯೋಗ ಸ್ಥಳದಲ್ಲಿ ಅಂದುಕೊಂಡ ಸ್ಥಾನಮಾನ ಪಡೆಯಲು ವಾರದ ಮಧ್ಯಭಾಗದಲ್ಲಿ ಅವಕಾಶ ದೊರೆಯುತ್ತದೆ. ಕಾನೂನು ವಿಚಾರಕ್ಕೆ ಸಂಬಂಧಿಸಿದ ಜವಾಬ್ದಾರಿಗಳನ್ನು ಪೂರೈಸಲು ಗಮನ ನೀಡಬೇಕಾಗುತ್ತದೆ. ರಿಯಲ್ ಎಸ್ಟೇಟ್ ವ್ಯವಹಾರಗಳಿಗೆ ಪೂರಕ ವಾತಾವರಣ ಸೃಷ್ಟಿ ಆಗಲಿದೆ. ಶುಭದಿನ: 09. ಲಿಂಗಾಷ್ಟಕ ಪಠಿಸಿರಿ.




ದಾಂಪತ್ಯ ಜೀವನ ಸಂತೋಷವಾಗಿ ಇರುತ್ತದೆ. ಸಂಬಂಧದಲ್ಲಿ ಬಾಂಧವ್ಯ ಇನ್ನಷ್ಟು ಗಟ್ಟಿಯಾಗುತ್ತದೆ. ವ್ಯಾಪಾರಿಗಳು ಉದ್ಯಮಿಗಳು ಬಹು ಕಾಲದ ಯೋಜನೆಗಳನ್ನು ಅನುಷ್ಠಾನಕ್ಕೆ ತರಲಿದ್ದೀರಿ. ಪ್ರವಾಸಕ್ಕೆ ತೆರಳುವ ಸಾಧ್ಯತೆ ಇದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಸಾಮಾಜಿಕವಾಗಿ ವರ್ಚಸ್ಸು ಹೆಚ್ಚಾಗಲಿದೆ. ಇದೇ ವೇಳೆ ಲಾಭದ ಪ್ರಮಾಣದಲ್ಲಿ ಹೆಚ್ಚಳವಾಗಲಿದೆ. ಶುಭದಿನ: 10. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ವಾರದ ಶುರುವಿನಲ್ಲಿ ನಿಮ್ಮ ಕೆಲಸಗಳನ್ನು ಪೂರ್ಣಗೊಳಿಸಲು ಶ್ರಮ ಪಡುತ್ತೀರಿ. ಕೆಲಸಗಳು ಆಗಲಿಲ್ಲ ಅಂದರೂ ನಿಮ್ಮ ಆತ್ಮವಿಶ್ವಾಸದಲ್ಲಿ ಯಾವುದೇ ಕುಂದುಂಟಾಗುವುದಿಲ್ಲ. ಹಣದ ಅಗತ್ಯವನ್ನು ಪೂರೈಸಿಕೊಳ್ಳುವ ಸಲುವಾಗಿ ಸಾಲಕ್ಕಾಗಿ ಅರ್ಜಿ ಹಾಕಿಕೊಳ್ಳಲಿದ್ದೀರಿ. ವಾರದ ಮಧ್ಯ ಭಾಗದಲ್ಲಿ ನಿಮ್ಮ ಕರ್ತವ್ಯವನ್ನು ಪೂರ್ಣಗೊಳಿಸುವ ಕಡೆಗೆ ಹೆಚ್ಚಿನ ಗಮನ ವಹಿಸಲಿದ್ದೀರಿ. ಶುಭದಿನ: 12. ವಿಷ್ಣು ಸಹಸ್ರನಾಮ ಪಠಿಸಿರಿ.




ಬೇರೆ ಮೂಲದಿಂದ ಹಣಕಾಸಿನ ಹರಿವು ಹೆಚ್ಚಾಗಲಿದೆ. ಸಾಮಾಜಿಕವಾಗಿ ಸ್ಥಾನಮಾನ ಕೂಡ ಹೆಚ್ಚಲಿದೆ. ಶೈಕ್ಷಣಿಕ ಕ್ಷೇತ್ರದಲ್ಲಿ ಏಳ್ಗೆ ಇದೆ. ಮಕ್ಕಳ ಪ್ರಗತಿಯಿಂದ ಹೆಮ್ಮೆ ಮೂಡುತ್ತದೆ. ಹಣ ಹೂಡಿಕೆ ಲಾಭದಾಯಕವಾಗಿ ಪರಿಣಮಿಸಲಿದೆ. ಕೆಲವು ನಿರ್ದಿಷ್ಟ ಕೆಲಸಗಳನ್ನು ಪೂರೈಸುವ ಸಲುವಾಗಿ ಹೆಚ್ಚು ಹಣವನ್ನು ಖರ್ಚು ಮಾಡಬೇಕಾಗುತ್ತದೆ. ಶುಭದಿನ: 08. ಶ್ರೀಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ವಾರದ ಆರಂಭದಲ್ಲಿ ನಿಮ್ಮ ಮೇಲೆ ಒತ್ತಡ ಕಂಡುಬರಲಿದೆ. ನಿಮ್ಮ ಪಾಲಿನ ಕೆಲಸಗಳನ್ನು ವೇಗವಾಗಿ ಪೂರ್ಣಗೊಳಿಸುವಿರಿ. ಸಾಮಾಜಿಕ ಜೀವನದಲ್ಲಿ ವರ್ಚಸ್ಸು ವೃದ್ಧಿಯಾಗಲಿದೆ. ಸಂಗಾತಿಗೆ ಉಡುಗೊರೆ ನೀಡುವ ಬಗ್ಗೆ ಆಲೋಚನೆ ಮಾಡುತ್ತೀರಿ. ಸಂಬಂಧದಲ್ಲಿ ಸುಧಾರಣೆ ಕಾಣಿಸಲಿದೆ. ಹಲವು ವಿಧದಲ್ಲಿ ಉತ್ತಮ ಫಲಿತಾಂಶವನ್ನು ಪಡೆಯಲಿದ್ದೀರಿ. ಶುಭದಿನ: 09. ಹನುಮಾನ್ ಚಾಲೀಸ್ ಪಠಿಸಿರಿ.




ವಾರದ ಶುರುವಿನಲ್ಲಿ ಪ್ರಗತಿ ಇದೆ. ಉದ್ಯಮಿಗಳಿಗೆ ನಿರಂತರವಾದ ಪ್ರಗತಿ ಇದೆ. ಪ್ರತಿಷ್ಠೆಯನ್ನು ಹೆಚ್ಚು ಮಾಡಿಕೊಳ್ಳುವ ಕಡೆಗೆ ಪ್ರಯತ್ನಿಸಿ. ನಿಮ್ಮ ಕೆಲಸವನ್ನು ಪರಿಣಾಮಕಾರಿಯಾಗಿ ಪೂರ್ಣಗೊಳಿಸಲು ಯಶಸ್ವಿಯಾಗುತ್ತೀರಿ. ಇದೇ ಸಮಯದಲ್ಲಿ ಆರೋಗ್ಯಕ್ಕೆ ಸಂಬಂಧಿಸಿದ ತೊಂದರೆ ಕಾಣಿಸಬಹುದು, ವೈದ್ಯರನ್ನು ಭೇಟಿ ಮಾಡಿ. ಉದ್ಯೋಗ ವಿಚಾರದಲ್ಲಿ ಚಿಂತೆ ಇದೆ. ಶುಭದಿನ: 07. ಆದಿತ್ಯ ಹೃದಯ ಪಠಿಸಿರಿ.




ಹಿಂದೆಂದಿಗಿಂತ ಹೆಚ್ಚು ಸ್ಪರ್ಧಾತ್ಮಕವಾಗಿ ಇರುತ್ತೀರಿ. ಶ್ರಮಪಟ್ಟು, ಯಶಸ್ಸು ಪಡೆಯಬೇಕಾಗುತ್ತದೆ. ಸಂವಹನದ ಕೊರತೆ ಎದ್ದು ಕಾಣಲಿದೆ. ವೈಯಕ್ತಿಕ ಸಂಬಂಧದಲ್ಲಿ ಭಿನ್ನಾಭಿಪ್ರಾಯ ಕಾಣಿಸಿಕೊಳ್ಳಲಿದ್ದು, ನೀವು ನೀಡುವ ವಿವರಣೆ ಕೇಳಿಸಿಕೊಳ್ಳಲು ಅವರು ತಯಾರಿರುವುದಿಲ್ಲ. ವ್ಯಾಪಾರ ವ್ಯವಹಾರದಲ್ಲಿ ಹೊಸ ಅವಕಾಶವೊಂದು ತೆರೆದುಕೊಳ್ಳುತ್ತದೆ. ಶುಭದಿನ: 11. ಕಾಲಭೈರವನ ಆರಾಧನೆ ಮಾಡಿರಿ.




ವಾರದ ಆರಂಭದಲ್ಲಿ ನಿಮ್ಮ ಜವಾಬ್ದಾರಿಯನ್ನು ಪೂರೈಸುವುದಕ್ಕಾಗಿಯೇ ಹೆಚ್ಚು ಸಮಯವನ್ನು ಮೀಸಲಿಡಬೇಕಾಗುತ್ತದೆ. ನಿಮ್ಮ ಬಗ್ಗೆ ಸಹೋದ್ಯೋಗಿಗಳು ಬಹಳ ಹೆಮ್ಮೆ ಪಡುತ್ತಾರೆ. ನಿಮ್ಮ ಸಾಮಾಜಿಕ ಸ್ಥಾನಮಾನ ಹೆಚ್ಚಲಿದೆ. ಜವಾಬ್ದಾರಿ ಜಾಸ್ತಿ ಆಗಲಿದೆ. ಆದಾಯ ಮೂಲಗಳಿಂದ ಅನುಕೂಲ ಇದೆ. ವಾರಾಂತ್ಯದಲ್ಲಿ ನಿಮ್ಮ ಆತ್ಮವಿಶ್ವಾಸ ಹೆಚ್ಚಾಗಲಿದೆ. ಶುಭದಿನ: 08. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ಭವಿಷ್ಯದ ಬಗ್ಗೆ ನಿರ್ಧಾರ ಮಾಡುವ ಸಲುವಾಗಿ ವಾರದ ಶುರುವಿನಲ್ಲಿ ಹೆಚ್ಚಿನ ಸಮಯ ನೀಡುತ್ತೀರಿ. ದೂರ ಪ್ರದೇಶಗಳಿಗೆ ಪ್ರಯಾಣ ಮಾಡಬೇಕಾಗುತ್ತದೆ. ನಿಮ್ಮ ಪ್ರಯತ್ನಗಳನ್ನು ಹೆಚ್ಚು ಪರಿಣಾಮಕಾರಿಯಾಗಿ ಮಾಡಲು ಗಮನ ನೀಡುತ್ತೀರಿ. ಹಣ ಹೂಡಿಕೆಯಲ್ಲಿ ಲಾಭವಾಗುವ ಸಾಧ್ಯತೆ ಇದೆ. ಪಿತ್ರಾರ್ಜಿತ ಆಸ್ತಿ ವಿಚಾರವಾಗಿ ಶುಭ ಸುದ್ದಿ ದೊರೆಯಲಿದೆ. ಶುಭದಿನ: 09. ದತ್ತಗುರು ಚರಿತ್ರೆ ಪಠಿಸಿರಿ.